# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 07-08-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ.ಹೆಚ್.ಎ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಘನತ್ಯಾಜ್ಯ ಸಂಗ್ರಹಿಸುವ ಆಟೋ ಟಿಪ್ಪರ್‌ಗಳು ಸಕಾಲಕ್ಕೆ ಆಗಮಿಸಿ, ತ್ಯಾಜ್ಯವನ್ನು ಸಂಗ್ರಹಿಸುತ್ತಿರುತ್ತವೆ. ಆದರೆ ರಸ್ತೆ ಗುಡಿಸುವಿಕೆಯಲ್ಲಿ ವಿಳಂಭವಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದಾಗ ಈ ಬಗ್ಗೆ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ರಸ್ತೆ ಗುಡಿಸುವಿಕೆಯನ್ನು ರಾಮಯ್ಯ ಬಡಾವಣೆಯಲ್ಲಿ ಆದ್ಯತೆ ಮೇರೆಗೆ ಪರಿಗಣಿಸಿ, ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

2) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿನ ರಸ್ತೆಗಳಲ್ಲಿ ರಸ್ತೆ ಗುಂಡಿಗಳು ಇರುವುದಿಲ್ಲ, ಆದರೆ ರಸ್ತೆ ಅಗೆತ ಹಾಗೂ ಇತ್ತೀಚಿನ ಬೆಸ್ಕಾಂ ಭೂಗತ ಕೇಬಲ್‌ಗಳನ್ನು ಅಳವಡಿಸಲು ರಸ್ತೆಗಳನ್ನು ಅಗೆಯುತ್ತಿರುತ್ತಾರೆ. ಇದನ್ನು ಕೂಡಲೇ ಪೂರ್ಣಗೊಳಿಸಿ, ರಸ್ತೆ ಅಗೆತದ ಭಾಗಕ್ಕೆ ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಲು ಸಭೆಯಲ್ಲಿ

Scanned with CamScanner

ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ, ಬೆಸ್ಕಾಂ ಅಧಿಕಾರಿಗಳು ಭೂಗತ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿ ಪೂರ್ಣಗೊಂಡ ಕೂಡಲೇ ರಸ್ತೆ ಅಗೆತದ ಭಾಗಕ್ಕೆ ಡಾಂಬರೀಕರಣ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

3) <u>ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)</u> ರವರು ಮಾತನಾಡಿ, ಬಿಡಿಎ ಬಡಾವಣೆಯಲ್ಲಿ ಪಾರ್ಕ್ ಹತ್ತಿರ ಬೀದಿ ದೀಪದ ಕಂಬಕ್ಕೆ ಎರಡು ಹೊಸ ಫಿಟ್ಟಿಂಗ್‌ಗಳು ಅವಶ್ಯಕತೆ ಇರುತ್ತದೆ ಎಂದು ತಿಳಿಸಿರುತ್ತಾರೆ. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಬೀದಿ ದೀಪಗಳ ಅಭಿಯಂತರರು ಮಾತನಾಡಿ, ಮೇಲಾಧಿಕಾರಿಗಳಿಂದ ಆದೇಶ ಪಡೆದು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ಉತ್ತರಿಸಿದರು.

4) <u>ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)</u> ರವರು ಮಾತನಾಡಿ, ಸಿ.ಎಂ.ಆರ್ ರಸ್ತೆ, ಕಾಫಿ ಡೇ ಹತ್ತಿರ ವಾಹನಗಳನ್ನು ಯದ್ವಾ ತದ್ವಾ ನಿಲುಗಡೆ ಮಾಡಿ, ಸಾರ್ವಜನಿಕರಿಗೆ ತೊಂದರೆ ಮಾಡುತ್ತಿರುತ್ತಾರೆ ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ, ಸಂಚಾರ ಪೊಲೀಸ್ ಅಧಿಕಾರಿಗಳು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

5) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ರಾಮಯ್ಯ ಬಡಾವಣೆಯಲ್ಲಿ ಇತ್ತೀಚೆಗೆ ಬಯಲು ಪ್ರದೇಶದಲ್ಲಿ ಮದ್ಯಪಾನ ಹಾಗೂ ಧೂಮಪಾನ ಮಾಡುವವರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಕ್ರಮ ಕೈಗೊಳ್ಳಲು ಪ್ರಸ್ತಾಪಿಸಿದಾಗ ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಪೊಲೀಸ್ ಅಧಿಕಾರಿಗಳು ಮಾತನಾಡಿ, ಸದರಿ ಪ್ರದೇಶಕ್ಕೆ ಹೆಚ್ಚಿನ ನಿಗಾ ವಹಿಸಲು ಹೊಯ್ಸಳ ಗಸ್ತನ್ನು ನಿಯೋಜಿಸಲಾಗುವುದು ಎಂದು ಸಭೆಗೆ ತಿಳಿಸಿದರು.

6) <u>ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು</u> ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 11 ಸಕ್ರಿಯ ಪ್ರಕರಣಗಳಲ್ಲಿ 08 ಹೋಮ್ ಐಸೋಲೇಷನ್, 03 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 25406 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner